ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacntsenmms@gmail.com

ಸಂಖ್ಯೆ: ಕೆ3/ NTSE-NMMS ಪ/ಅರ್ಜಿ/ಅನು/46/2020–21 ದಿನಾಂಕ: 09.11.2020

# ಸುತ್ತೋಲೆ

ವಿಷಯ:–2020–21 ನೇ ಸಾಲಿನ ನ್ಯಾಷನಲ್ ಮೀನ್ಸ್–ಕಮ್–ಮೆರಿಟ್ ವಿದ್ಯಾರ್ಥಿ ವೇತನ (National Means-cum-Merit Scholarship- NMMS) ಪರೀಕ್ಷೆಗೆ Online ಮೂಲಕ ಅರ್ಜಿ ಸಲ್ಲಿಸುವ ಸಂಬಂಧ ವಿವಿಧ ಹಂತದ ಅಧಿಕಾರಿಗಳ ಜವಾಬ್ದಾರಿಗಳು ಹಾಗೂ ಶಾಲಾ ಮುಖ್ಯ ಶಿಕ್ಷಕರು / ಪ್ರಾಂಶುಪಾಲರು ಅನುಸರಿಸಬೇಕಾದ ಕ್ರಮಗಳ ಬಗ್ಗೆ.

ಉಲ್ಲೇಖ:– Department of school Education & Literacy ನವದೆಹಲಿ ರವರ ಪತ್ರ ಸಂಖ್ಯೆ: F.No.1-10/2010-SS Dated:14-10-2020.

~*~*~*~

2020–21ನೇ ಸಾಲಿನಲ್ಲಿ ನ್ಯಾಷನಲ್ ಮೀನ್ಸ್–ಕಮ್–ಮೆರಿಟ್ ವಿದ್ಯಾರ್ಥಿ ವೇತನ ಪರೀಕ್ಷೆ (National Means- cum-Merit Scholarship- NMMS)ಯನ್ನು, 2020–21 ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆ (Local body schools) ಶಾಲೆಗಳಲ್ಲಿ 8 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ Department of School Education & Literacy ನವದೆಹಲಿ ರವರ ಪತ್ರ ಸಂಖ್ಯೆ: F.No.1-10/2010-SS Dated:14-10-2020 ರನ್ವಯ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ **ದಿನಾಂಕ:24.01.2021** ರಂದು ನಡೆಸಲಾಗುವುದು.

ಪ್ರಸಕ್ತ ಸಾಲಿನಲ್ಲಿ NMMS ಪರೀಕ್ಷೆಗೆ Online ಮೂಲಕ ಅರ್ಜಿಯನ್ನು **ದಿನಾಂಕ: 09.11.2020** ರಿಂದ ಆಹ್ವಾನಿಸಲಾಗುತ್ತಿದ್ದು, ಕಳೆದ ಸಾಲಿನಂತೆಯೇ ಪ್ರಸಕ್ತ ಸಾಲಿನಲ್ಲಿಯೂ ಮುಖ್ಯ ಶಿಕ್ಷಕರು ತಮ್ಮ ಶಾಲಾ ವಿದ್ಯಾರ್ಥಿಗಳ ಅರ್ಜಿಗಳನ್ನು ಕಡ್ಡಾಯವಾಗಿ Online ಮೂಲಕವೇ ಸಲ್ಲಿಸುವುದು.

**NMMS ಪರೀಕ್ಷೆಯ ಸಂಕ್ಷಿಪ್ತ ವಿವರ:–** ನ್ಯಾಷನಲ್ ಮೀನ್ಸ್–ಕಮ್–ಮೆರಿಟ್ ವಿದ್ಯಾರ್ಥಿ ವೇತನ ಯೋಜನೆ (National Means-cum-Merit Scholarship- NMMS) ಪರೀಕ್ಷೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನವದೆಹಲಿ ಇವರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವುದು ಮತ್ತು ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ವಿದ್ಯಾರ್ಥಿಗಳು ಶಾಲೆಯಿಂದ ಹೊರಗುಳಿಯದಂತೆ ತಡೆಯುವುದು ಮತ್ತು 12 ನೇ ತರಗತಿಯವರೆಗೆ ಅವರ ವಿದ್ಯಾಭ್ಯಾಸದ ಮುಂದುವರಿಕೆಗೆ ಪ್ರೇರೇಪಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಸದರಿ ಪರೀಕ್ಷೆಯನ್ನು ಕನ್ನಡ, ಇಂಗ್ಲೀಷ್, ಉರ್ದು, ಮರಾಠಿ ಮತ್ತು ತೆಲುಗು ಮಾಧ್ಯಮಗಳಲ್ಲಿ ನಡೆಸುತ್ತಿದ್ದು, ಸದರಿ ಪರೀಕ್ಷೆಯನ್ನು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ಯು ತಾಲ್ಲೂಕು ಕೇಂದ್ರಗಳಲ್ಲಿ ನಡೆಸಲಾಗುವುದು.

## ಅರ್ಹತೆ (Eligibility) :-

ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 8ನೇ ತರಗತಿ ವಿದ್ಯಾರ್ಥಿಗಳು ಮಾತ್ರ NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನದಿಂದ ನಡೆಯುವ ವಸತಿಯುತ ಶಾಲೆಗಳ ವಿದ್ಯಾರ್ಥಿಗಳು ಅರ್ಹರಿರುವುದಿಲ್ಲ. (ಉದಾ: ಮೊರಾರ್ಜಿ ದೇಸಾಯಿ, ನವೋದಯ ಶಾಲೆ, ಕೇಂದ್ರೀಯ ವಿದ್ಯಾಲಯ, ಸೈನಿಕ ಶಾಲೆ, ಇತ್ಯಾದಿ)

## NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು ಇರುವ ನಿಬಂಧನೆಗಳು:-

- ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳಲ್ಲಿ Regular ವಿದ್ಯಾರ್ಥಿಯಾಗಿ ವ್ಯಾಸಂಗ ಮಾಡುತ್ತಿರಬೇಕು.
- ಪೋಷಕರ ವಾರ್ಷಿಕ ವರಮಾನ ರೂ.1,50,000/- ಮೀರಿರಬಾರದು.
- 7ನೇ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.55 ಅಂಕಗಳನ್ನು (ಅಥವಾ ಪೂರಕ ಗ್ರೇಡ್) ಪಡೆದಿರಬೇಕು.
- ಪ.ಜಾ ಮತ್ತು ಪ.ಪಂ ವಿದ್ಯಾರ್ಥಿಗಳಿಗೆ ಶೇ.5 ರಷ್ಟು ವಿನಾಯಿತಿ ಇರುತ್ತದೆ.

## NMMS ಪರೀಕ್ಷೆಯ ಉದ್ದೇಶಗಳು:-

1) 8 ನೇ ತರಗತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸುವುದು.
2) ಗುರುತಿಸಿದ ವಿದ್ಯಾರ್ಥಿಗಳ ವಿದ್ಯಾಭ್ಯಾಸ ಮುಂದುವರಿಕೆಗೆ ವಿದ್ಯಾರ್ಥಿ ವೇತನ ನೀಡುವುದು.
3) ಪ್ರತಿಭಾವಂತ ವಿದ್ಯಾರ್ಥಿಗಳು ಶಾಲೆಯಿಂದ ಹೊರಗುಳಿಯದಂತೆ ತಡೆದು ಅವರ ವಿದ್ಯಾಭ್ಯಾಸ ಮುಂದುವರಿಕೆಗೆ ಪ್ರೇರೇಪಿಸುವುದು.

## NMMS ಪರೀಕ್ಷೆಯ ಪ್ರಶ್ನೆಪತ್ರಿಕೆಯ ಸ್ವರೂಪ

ಈ ಪರೀಕ್ಷೆಯು ಬಹು ಆಯ್ಕೆ ಮಾದರಿಯ ಎರಡು ಪ್ರಶ್ನೆಪತ್ರಿಕೆಗಳನ್ನು ಒಳಗೊಂಡಿರುತ್ತದೆ.

### ಅ) ಬೌದ್ಧಿಕ ಸಾಮರ್ಥ್ಯ ಪರೀಕ್ಷೆ (Mental Ability Test -MAT)

ಈ ಪ್ರಶ್ನೆಪತ್ರಿಕೆಯಲ್ಲಿ 90 ಬಹು ಆಯ್ಕೆ ಪ್ರಶ್ನೆಗಳಿರುತ್ತವೆ. ಪ್ರತಿ ಪ್ರಶ್ನೆಗೂ ಒಂದು ಅಂಕದಂತೆ 90 ಅಂಕಗಳನ್ನು ನಿಗದಿಪಡಿಸಲಾಗಿದ್ದು, ಕಾರಣ ನೀಡುವ, ವಿಶ್ಲೇಷಿಸುವ ಇತ್ಯಾದಿ ಸಾಮರ್ಥ್ಯಗಳನ್ನು ಅಳೆಯುವ ಪ್ರಶ್ನೆಗಳಿರುತ್ತವೆ.

### ಆ) ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ (Scholastic Aptitude Test-SAT)

ಈ ಪ್ರಶ್ನೆಪತ್ರಿಕೆಯಲ್ಲಿ ಒಟ್ಟು 90 ಬಹು ಆಯ್ಕೆ ಪ್ರಶ್ನೆಗಳಿರುತ್ತವೆ. ಇವುಗಳಲ್ಲಿ 35 ಪ್ರಶ್ನೆಗಳು ವಿಜ್ಞಾನ (ಭೌತಶಾಸ್ತ್ರ, ರಸಾಯನ ಶಾಸ್ತ್ರ ಮತ್ತು ಜೀವಶಾಸ್ತ್ರ), 35 ಪ್ರಶ್ನೆಗಳು ಸಮಾಜ ವಿಜ್ಞಾನ (ಇತಿಹಾಸ, ಭೂಗೋಳ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ) ಮತ್ತು 20 ಪ್ರಶ್ನೆಗಳು ಗಣಿತ ವಿಷಯಕ್ಕೆ ಸಂಬಂಧಿಸಿರುತ್ತವೆ.

## NMMS ಪರೀಕ್ಷೆಯ ಆಯ್ಕೆ ಪ್ರಕ್ರಿಯೆ (Selection Procedure):-

ಈ ಪರೀಕ್ಷೆಯು ಎರಡು ಪ್ರಶ್ನೆಪತ್ರಿಕೆಗಳನ್ನು ಒಳಗೊಂಡಿದ್ದು, ಸಾಮಾನ್ಯ ಮತ್ತು ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಎರಡೂ ಪತ್ರಿಕೆಗಳಲ್ಲಿ ಸರಾಸರಿ ಕನಿಷ್ಠ ಶೇ.40 ರಷ್ಟು ಅಂಕಗಳನ್ನು ಹಾಗೂ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಎರಡೂ ಪತ್ರಿಕೆಗಳಲ್ಲಿ ಸರಾಸರಿ ಕನಿಷ್ಠ ಶೇ.32 ರಷ್ಟು ಅಂಕಗಳನ್ನು ಪಡೆಯಬೇಕು. ಪ್ರತಿ ಜಿಲ್ಲೆಯಲ್ಲಿ ಪರೀಕ್ಷೆ ಬರೆದ ಒಟ್ಟು ವಿದ್ಯಾರ್ಥಿಗಳಲ್ಲಿ ವಿವಿಧ ಜಾತಿ/ವರ್ಗಗಳ ವಿದ್ಯಾರ್ಥಿಗಳನ್ನು ಚಾಲ್ತಿಯಲ್ಲಿರುವ ಮೀಸಲಾತಿ ಹಾಗೂ ಅರ್ಹತಾ ನಿಯಮಗಳ ಅನುಸಾರ rank ಆಧರಿಸಿ ಆಯ್ಕೆ ಮಾಡಲಾಗುವುದು. ಆಯ್ಕೆಯಾದವರಿಗೆ 9 ನೇ ತರಗತಿಯಿಂದ ತಿಂಗಳಿಗೆ ರೂ.1000/-ರಂತೆ ವರ್ಷಕ್ಕೆ ರೂ. 12,000/- ಗಳನ್ನು 4 ವರ್ಷಗಳವರೆಗೆ (ದ್ವಿತೀಯ ಪಿ.ಯು.ಸಿ ಯವರೆಗೆ) ವಿದ್ಯಾರ್ಥಿ ವೇತನವನ್ನು ನೀಡಲಾಗುವುದು.

**ವಿದ್ಯಾರ್ಥಿ ವೇತನ ವಿತರಣೆ:-** ಆಯ್ಕೆಯಾದ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎಂ.ಹೆಚ್.ಆರ್.ಡಿ ನವದೆಹಲಿ ರವರು ಸಿದ್ಧಪಡಿಸಿರುವ ಎನ್.ಎಸ್.ಪಿ 2.0 ವೆಬ್‌ಸೈಟ್ : www.scholorships.gov.in ನಲ್ಲಿ ವಿದ್ಯಾರ್ಥಿ ವೇತನಕ್ಕೆ 9ನೇ ತರಗತಿಯಿಂದ 12ನೇ ತರಗತಿ ವರೆಗೆ ಆನ್‌ಲೈನ್‌ನಲ್ಲಿ ಪ್ರತಿ ವರ್ಷವು ಅರ್ಜಿ ಸಲ್ಲಿಸಬೇಕಾಗಿರುತ್ತದೆ.

## ವಿದ್ಯಾರ್ಥಿ ವೇತನ ಮುಂದುವರಿಕೆಗೆ ನಿಬಂಧನೆಗಳು:-

NMMS ಪರೀಕ್ಷೆಯಲ್ಲಿ ಆಯ್ಕೆಯಾದ ಮೇಲೆ ವಿದ್ಯಾರ್ಥಿ ವೇತನ ಮುಂದುವರಿಕೆಗೆ ಶೈಕ್ಷಣಿಕ ಹಿರಿಮೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ಕೆಳಗಿನಂತೆ ನಿಬಂಧನೆಗಳಿರುತ್ತವೆ.

- ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು 9, ಮತ್ತು 11ನೇ ತರಗತಿಗಳಲ್ಲಿ ಕನಿಷ್ಟ ಶೇ.55 ರಷ್ಟು ಮತ್ತು 10ನೇ ತರಗತಿಯಲ್ಲಿ ಕನಿಷ್ಟ ಶೇ.60 ರಷ್ಟು ಅಂಕಗಳನ್ನು ಗಳಿಸಬೇಕಾಗುತ್ತದೆ. ಪ.ಜಾತಿ/ಪ.ಪಂ ವಿದ್ಯಾರ್ಥಿಗಳಿಗೆ ಶೇ.5ರಷ್ಟು ವಿನಾಯಿತಿ ಇರುತ್ತದೆ.

- ಆಯ್ಕೆಯಾದ ವಿದ್ಯಾರ್ಥಿಗಳು ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆ/ಕಾಲೇಜಿನಲ್ಲಿ ಮಾತ್ರ ತಮ್ಮ ವಿದ್ಯಾಭ್ಯಾಸ ಮುಂದುವರಿಸಬೇಕು.
- ವಿದ್ಯಾರ್ಥಿಯು 9, 10 ಮತ್ತು 11 ನೇ ತರಗತಿಯಲ್ಲಿ ಪ್ರಥಮ ಪ್ರಯತ್ನ (First Attempt) ದಲ್ಲೇ ತೇರ್ಗಡೆಯಾಗಬೇಕು
- ವಿದ್ಯಾರ್ಥಿಗಳು ಯಾವುದಾದರು ಒಂದು ಯೋಜನೆಯ ವಿದ್ಯಾರ್ಥಿ ವೇತನವನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.
- ITI ಹಾಗೂ Diploma ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುವವರು ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿರುವುದಿಲ್ಲ.
- ವಿದೇಶಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ ಅರ್ಹರಾಗಿರುವುದಿಲ್ಲ.

**2020–21 ನೇ ಸಾಲಿನ NMMS ಪರೀಕ್ಷೆಯ ಶುಲ್ಕದ ವಿವರಗಳು:–**

| ಸಂಸ್ಥೆಗಳು | ಅರ್ಜಿ ಶುಲ್ಕ | ಪರೀಕ್ಷಾ ಶುಲ್ಕ | |
|---|---|---|---|
| ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ (Local body schools) ಶಾಲೆಗಳು | ಇಲ್ಲ | ಸಾಮಾನ್ಯ, ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ | ರೂ.20/– |
| | | ಪ.ಜಾ/ಪ.ಪಂ. ವಿದ್ಯಾರ್ಥಿಗಳಿಗೆ | ರೂ.10/– |

**2020–21 ನೇ ಸಾಲಿನ NMMS ಪರೀಕ್ಷೆಗೆ ನಿಗದಿಪಡಿಸಿರುವ ಪ್ರಶ್ನೆಪತ್ರಿಕೆಗಳ ಸ್ವರೂಪ:–**

| ಪರೀಕ್ಷೆ | ಒಟ್ಟು ಪ್ರಶ್ನೆಗಳು | ಸಮಯ ನಿಗದಿ | ವಿಭಾಗವಾರು ಅಂಕಗಳ ವಿಂಗಡಣೆ |
|---|---|---|---|
| ಪತ್ರಿಕೆ–1 ಬೌದ್ಧಿಕ ಸಾಮರ್ಥ್ಯ ಪರೀಕ್ಷೆ (MAT) | 90 | 90 ನಿಮಿಷಗಳು (30 Minutes extra time will be given to disability students) | --- |
| ಪತ್ರಿಕೆ–2 ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ (SAT) | 90 | 90 ನಿಮಿಷಗಳು (30 Minutes extra time will be given to disability students) | ವಿಜ್ಞಾನ ವಿಷಯಕ್ಕೆ – 35 ಅಂಕಗಳು, ಸಮಾಜ ವಿಜ್ಞಾನಕ್ಕೆ – 35 ಅಂಕಗಳು, ಗಣಿತ ವಿಷಯಕ್ಕೆ – 20 ಅಂಕಗಳು. |

**2020–21 ನೇ ಸಾಲಿನ NMMS ಪರೀಕ್ಷೆಗೆ ನಿಗದಿಪಡಿಸಿರುವ ವೇಳಾಪಟ್ಟಿ :–**

| ಪ್ರಶ್ನೆ ಪತ್ರಿಕೆಗಳು | ಪರೀಕ್ಷಾ ದಿನಾಂಕ | ಸಮಯ ನಿಗದಿ |
|---|---|---|
| ಪತ್ರಿಕೆ–1 ಬೌದ್ಧಿಕ ಸಾಮರ್ಥ್ಯ ಪರೀಕ್ಷೆ (MAT) | 24.01.2021 ಭಾನುವಾರ | **ಬೆಳಗ್ಗೆ 10.00– 11.30ರವರೆಗೆ** (ಒಟ್ಟು 90 ನಿಮಿಷಗಳು) (ವಿಕಲಚೇತನ ವಿದ್ಯಾರ್ಥಿಗಳಿಗೆ 30 ನಿಮಿಷ ಹೆಚ್ಚುವರಿ ಸಮಯವಿರುತ್ತದೆ / 30 Minutes extra time will be given to disability students) |
| ಪತ್ರಿಕೆ–2 ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ (SAT) | 24.01.2021 ಭಾನುವಾರ | **ಮಧ್ಯಾಹ್ನ2.00ರಿಂದ 3.30ರವರೆಗೆ** (ಒಟ್ಟು 90 ನಿಮಿಷಗಳು) (ವಿಕಲಚೇತನ ವಿದ್ಯಾರ್ಥಿಗಳಿಗೆ 30 ನಿಮಿಷ ಹೆಚ್ಚುವರಿ ಸಮಯವಿರುತ್ತದೆ. / 30 Minutes extra time will be given to disability students) |

**NMMS ಪರೀಕ್ಷೆಯಲ್ಲಿ ಉಪನಿರ್ದೇಶಕರು (ಆಡಳಿತ) ರವರ ಜವಾಬ್ದಾರಿಗಳು:–**

- NMMS ಪರೀಕ್ಷೆಯ ರೂಪುರೇಷೆ ಹಾಗೂ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ಸಭೆ ಕರೆದು ಸಂಪೂರ್ಣ ಮಾಹಿತಿ ಒದಗಿಸುವುದು.
- NMMS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು.

- ಶಾಲಾ ಮುಖ್ಯ ಶಿಕ್ಷಕರ ಸಭೆ ಕರೆದು ಪರೀಕ್ಷೆ ಬಗ್ಗೆ ಮಾಹಿತಿ ನೀಡುವುದು.
- ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಆಯಾ ತಾಲ್ಲೂಕಿನ ಪರೀಕ್ಷೆಯ ಸಂಪೂರ್ಣ ಜವಾಬ್ದಾರಿಯನ್ನು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ವಹಿಸುವುದು ಹಾಗೂ ಮೇಲುಸ್ತುವಾರಿ ಮಾಡುವುದು.

**NMMS ಪರೀಕ್ಷೆಯಲ್ಲಿ ಉಪನಿರ್ದೇಶಕರು (ಅಭಿವೃದ್ಧಿ) ರವರ ಜವಾಬ್ದಾರಿಗಳು:-**

- NMMS ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸುವ ಬಗ್ಗೆ ಸಂಪೂರ್ಣ ಉಸ್ತುವಾರಿ ವಹಿಸುವುದು.
- ಸದರಿ ಪರೀಕ್ಷೆ ಆಯೋಜನೆಗೆ ಜಿಲ್ಲಾ ಹಂತದ ನೋಡಲ್ ಅಧಿಕಾರಿಯನ್ನು ನೇಮಿಸುವುದು.
- ಜಿಲ್ಲಾ ಹಂತದಲ್ಲಿ ತಮ್ಮ ಜಿಲ್ಲಾ ವ್ಯಾಪ್ತಿಯ ಶಾಲೆಗಳ ಮುಖ್ಯ ಶಿಕ್ಷಕರ ಸಭೆ ಕರೆದು ಪರೀಕ್ಷೆಯ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು.
- ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸುವ ಬಗ್ಗೆ ಅಗತ್ಯ ಕ್ರಮವಹಿಸುವುದು.
- ಪರೀಕ್ಷೆಯ ಬಗ್ಗೆ ಸ್ಥಳೀಯ ಸುದ್ಧಿ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ನೀಡುವುದು.
- ಪರೀಕ್ಷಾ ಸಂಬಂಧ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ಸೂಚನೆಯಂತೆ ಸಭೆಗಳಿಗೆ ನೋಡಲ್ ಅಧಿಕಾರಿಯು ಹಾಜರಾಗುವಂತೆ ಕ್ರಮವಹಿಸುವುದು.
- ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಪರೀಕ್ಷಾ ಸಂಬಂಧ ಬಿಡುಗಡೆಯಾಗುವ ಅನುದಾನದಲ್ಲಿ ನಿಯಮನುಸಾರ ವೆಚ್ಚ ಭರಿಸಿ, ಲೆಕ್ಕಪತ್ರಗಳನ್ನು ನಿರ್ವಹಿಸುವುದು ಹಾಗೂ ನಿಗದಿತ ಸಮಯದೊಳಗೆ ಉಪಯೋಗಿತ ಪ್ರಮಾಣ ಪತ್ರ ನೀಡುವುದು.

**NMMS ಪರೀಕ್ಷೆ ಆಯೋಜನೆಯಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳ ಜವಾಬ್ದಾರಿಗಳು:-**

- NMMS ಪರೀಕ್ಷೆಯ ಬಗ್ಗೆ ತಾಲ್ಲೂಕಿನ ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಗಳ ಶಾಲೆಗಳ ಮುಖ್ಯೋಪಾಧ್ಯಾಯರ ಸಭೆ ಕರೆದು ಸಂಪೂರ್ಣ ಮಾಹಿತಿ ನೀಡುವುದು ಹಾಗೂ ಪ್ರತಿ ಶಾಲೆಯಿಂದ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ಕ್ರಮವಹಿಸುವುದು.
- NMMS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು.
- ತಮ್ಮ ತಾಲ್ಲೂಕು ವ್ಯಾಪ್ತಿಯ ಪರೀಕ್ಷಾ ವ್ಯವಸ್ಥೆಯ ಸಂಪೂರ್ಣ ಜವಾಬ್ದಾರಿಯನ್ನು ಕ್ರಮಬದ್ಧವಾಗಿ ನಿರ್ವಹಿಸುವುದು.
- ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಪರೀಕ್ಷೆಯ ಪೂರ್ವ ಮತ್ತು ಪರೀಕ್ಷಾ ಸಂದರ್ಭದಲ್ಲಿನ ಕಾರ್ಯಚಟುವಟಿಕೆಗಳ ಅನುಷ್ಠಾನಕ್ಕೆ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ, ಇ.ಸಿ.ಒ, ಬಿ.ಆರ್.ಪಿ ಹಾಗೂ ಸಿ.ಆರ್.ಪಿಗಳಿಗೆ ಕಾರ್ಯ ಹಂಚಿಕೆಮಾಡಿ ಸಕ್ರಿಯವಾಗಿ ಕಾರ್ಯನಿರ್ವಹಿಸುವಂತೆ ಕ್ರಮವಹಿಸುವುದು.
- ಇದುವರೆಗೆ ಯಾವುದಾದರೂ ಶಾಲೆಯ ವಿದ್ಯಾರ್ಥಿಗಳನ್ನು SATS ನಲ್ಲಿ ನೋಂದಾಯಿಸದೇ ಇದ್ದಲ್ಲಿ ಕಡ್ಡಾಯವಾಗಿ ನೊಂದಾಯಿಸಲು ಕ್ರಮಕೈಗೊಂಡು ವಿದ್ಯಾರ್ಥಿಗಳು Online ನಲ್ಲಿ ಅರ್ಜಿ ಸಲ್ಲಿಸಲು ತಕ್ಷಣ ಕ್ರಮಕೈಗೊಳ್ಳುವುದು.

**NMMS ಪರೀಕ್ಷೆಯ ಅರ್ಜಿಯನ್ನು Online ಮೂಲಕ ಸಲ್ಲಿಸುವಾಗ ಮುಖ್ಯ ಶಿಕ್ಷಕರು ಗಮನಿಸಬೇಕಾದ ಅಂಶಗಳು:-**

**ದಿನಾಂಕ: 09.11.2020** ರಿಂದ **NMMS** ಪರೀಕ್ಷೆಗೆ **Online** ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸದರಿ ಅರ್ಜಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ Website Home Page ನ School Login ನಲ್ಲಿ ಲಭ್ಯವಿದ್ದು, ಸಂಬಂಧಿಸಿದ ಶಾಲೆಯ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಯನ್ನು Online ಮೂಲಕ ಭರ್ತಿ ಮಾಡಲು ತಿಳಿಸಿದೆ. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30.11.2020 ಆಗಿರುತ್ತದೆ.**

- NMMS ಪರೀಕ್ಷೆಯ ಅರ್ಜಿಯನ್ನು ಶಾಲಾ ಮುಖ್ಯಸ್ಥರು ಮಂಡಳಿಯ kseeb.kar.nic.in ವೆಬ್‌ಸೈಟ್ ಮೂಲಕ Login ಆಗಿ "NMMS Application Form" ಎಂಬ link ಮೂಲಕ ಭರ್ತಿ ಮಾಡಲು ಸಹಾಯವಾಗುವಂತೆ ಅರ್ಜಿ Flow Chart, User Manual ನೀಡಲಾಗುವುದು.

- ಮಂಡಳಿಯ ವೆಬ್‌ಸೈಟ್‌ನ ಮುಖಪುಟದಲ್ಲಿನ School Login ಮೂಲಕ Login ಆದಾಗ ಅರ್ಜಿ ಭರ್ತಿ ಮಾಡುವ ಮೊದಲು ಗೋಚರಿಸುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಂಡು ಅರ್ಜಿ ಭರ್ತಿ ಮಾಡಬೇಕು.
- ಅರ್ಜಿಯನ್ನು ಸಂಪೂರ್ಣ ವಿವರಗಳೊಂದಿಗೆ ತಪ್ಪಿಲ್ಲದಂತೆ ಭರ್ತಿ ಮಾಡಬೇಕು.
- ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಸಂಭವಿಸುವ ತಾಂತ್ರಿಕ ಅಡಚಣೆ ಹಾಗೂ ಇನ್ನಿತರ ಮಾಹಿತಿಗಳಿಗಾಗಿ ಕಛೇರಿ ಕರ್ತವ್ಯದ ಸಮಯದಲ್ಲಿ ಈ ಕಛೇರಿಯ ದೂರವಾಣಿ ಸಂಖ್ಯೆ : 080-**23341615** ಗೆ ಕರೆ ಮಾಡುವುದು ಮತ್ತು ಸಮಸ್ಯೆಯ ವಿವರವನ್ನು ಈ ಕಛೇರಿಯ ಇ-ಮೇಲ್ ವಿಳಾಸವಾದ ksqaacntsenmms@gmail.com ಗೆ ಮಾಹಿತಿಯನ್ನು ಕಳುಹಿಸುವುದು.
- ಉನ್ನತೀಕರಿಸಿದ ಸರ್ಕಾರಿ ಹಿರಿಯ ಪಾಥಮಿಕ ಶಾಲೆ, ಸರ್ಕಾರಿ ಪ್ರೌಢಶಾಲೆ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆಗಳ ಶಾಲೆಗಳ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು **NMMS** ಪರೀಕ್ಷೆಗೆ ಅರ್ಜಿ ಸಲ್ಲಿಸಲು http://kseeb.kar.nic.in ವೆಬ್‌ಸೈಟ್‌ನಲ್ಲಿ ತಮ್ಮ ಶಾಲೆಯ KSEEB School Code ಮೂಲಕ Login ಆಗುವುದು.
- KSEEB School Code ಹೊಂದಿರದ ಉನ್ನತ್ತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆ (Upgraded Higher Primary School) ಗಳ ಮುಖ್ಯ ಶಿಕ್ಷಕರು NMMS ಪರೀಕ್ಷೆಗೆ ಅರ್ಜಿ ಸಲ್ಲಿಸಲು http://kseeb.kar.nic.in ವೆಬ್‌ಸೈಟ್‌ನಲ್ಲಿ ತಮ್ಮ ಶಾಲೆಯ UDISE ಮೂಲಕ Login ಆಗುವುದು. ನಂತರ NMMS ಪರೀಕ್ಷೆಗೆ ಅರ್ಜಿ ಸಲ್ಲಿಸುವ Link ಅನ್ನು Click ಮಾಡುವುದು. ಆಗ ಅರ್ಜಿ ನಮೂನೆಯು Open ಆಗುತ್ತದೆ. ನಂತರ UDISE ಸಂಖ್ಯೆಯನ್ನು USER NAME ಆಗಿ ಬಳಸುವುದು ಹಾಗೂ ಮುಖ್ಯ ಶಿಕ್ಷಕರ ಮೊಬೈಲ್‌ಗೆ ರವಾನಿಸಲಾಗುವ OTP ಯನ್ನು ಬಳಸಿ Register ಆಗುವುದು. Register ಸಮಯದಲ್ಲಿ ನೀಡಿದ ಮೊಬೈಲ್‌ಗೆ USER ID ಮತ್ತು Password ರವಾನಿಸಲಾಗುವುದು.
- ಕಳೆದ ಸಾಲಿನಲ್ಲಿ Register ಮಾಡಿಕೊಂಡಿರುವ ಶಾಲಾ ಮುಖ್ಯ ಶಿಕ್ಷಕರು / ಪ್ರಾಂಶುಪಾಲರು ಮತ್ತೊಮ್ಮೆ ಹೊಸದಾಗಿ Register ಮಾಡಿಕೊಳ್ಳುವ ಅವಶ್ಯಕತೆ ಇರುವುದಿಲ್ಲ. ಒಂದು ವೇಳೆ Password ಮರೆತಿದ್ದಲ್ಲಿ Forgot Password ಕ್ಲಿಕ್ ಮಾಡುವ ಮೂಲಕ ಹೊಸದಾಗಿ Password ಜನರೇಟ್ ಮಾಡಿಕೊಳ್ಳುವುದು.
- ಮೊಬೈಲ್ ಸಂಖ್ಯೆಯಲ್ಲಿ ಬದಲಾವಣೆ ಇದ್ದಲ್ಲಿ ಈ ಕಛೇರಿಯ ಇ-ಮೇಲ್ ವಿಳಾಸ ksqaacntsenmms@gmail.com ಗೆ ಪತ್ರ ವ್ಯವಹಾರ ಮಾಡಿ ಮೊಬೈಲ್ ಸಂಖ್ಯೆಯನ್ನು ಬದಲಾಯಿಸಿಕೊಳ್ಳುವುದು.
- ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ SATS ಸಂಖ್ಯೆಯನ್ನು ನಮೂದಿಸುವುದು. ನಮೂದಿಸಲ್ಪಟ್ಟ SATS ಸಂಖ್ಯೆಯನ್ನು ಆಧರಿಸಿ ಸಂಬಂಧಿಸಿದ ವಿದ್ಯಾರ್ಥಿ ಮತ್ತು ಶಾಲಾ ಮಾಹಿತಿಗಳು ಲಭ್ಯವಾಗುತ್ತದೆ. (ಕ್ರಮ ಸಂಖ್ಯೆ 1ರಿಂದ 11ರ ವಿವರಗಳು) **ಶಾಲೆಯ ವಿಳಾಸಕ್ಕೆ ಸಂಬಂಧಿಸಿದಂತೆ ಪಿನ್‌ಕೋಡ್ ನಮೂದಿಸಲು ಅವಕಾಶವನ್ನು ನೀಡಲಾಗಿದ್ದು, ಪಿನ್‌ಕೋಡ್ ಅನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ.** ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ SATS ನಲ್ಲಿನ ಮಾಹಿತಿಗಳಿಗೆ ಸಂಬಂಧಿಸಿದಂತೆ ಯಾವುದೇ ತಿದ್ದುಪಡಿಗೆ ಅವಕಾಶವಿರುವುದಿಲ್ಲ, ಒಂದು ವೇಳೆ ತಿದ್ದುಪಡಿಗಳಿದ್ದಲ್ಲಿ SATS ನಲ್ಲಿ ಮೊದಲು ತಿದ್ದುಪಡಿ ಮಾಡಬೇಕು ನಂತರ ಸದರಿ ತಿದ್ದುಪಡಿ ಮಾಹಿತಿಗಳು NMMS ಪರೀಕ್ಷೆಯ ಅರ್ಜಿಯಲ್ಲಿ ಸ್ವಯಂಚಾಲಿತವಾಗಿ Update ಆಗಿರುವ ಬಗ್ಗೆ ದೃಢೀಕರಿಸಿಕೊಂಡು ಅರ್ಜಿ ಸಲ್ಲಿಸುವುದು.
- ಅರ್ಜಿಯಲ್ಲಿನ ಕ್ರಮಸಂಖ್ಯೆ 12 ರಿಂದ ವಿದ್ಯಾರ್ಥಿಯ ಮಾಹಿತಿಯನ್ನು ಸಂಬಂಧಿಸಿದ ಮುಖ್ಯ ಶಿಕ್ಷಕರು / ಪ್ರಾಂಶುಪಾಲರೇ ತಪ್ಪದೇ ಭರ್ತಿ ಮಾಡಬೇಕು. ಅರ್ಜಿ ಸಲ್ಲಿಸಿದ ನಂತರ ಅರ್ಜಿ ಪ್ರತಿ (Report) ಹಾಗೂ ಪೂರಕ ಪ್ರಮಾಣ ಪತ್ರಗಳ ಒಂದು ಸೆಟ್ ದಾಖಲೆಗಳನ್ನು ಶಾಲೆಯಲ್ಲಿ ಕಾಯ್ದಿರಿಸುವುದು ಕಡ್ಡಾಯವಾಗಿರುತ್ತದೆ. **ಅರ್ಜಿ ಪ್ರತಿ, ಚಲನ್ ಹಾಗೂ ಇತರೆ ಯಾವುದೇ <u>ಪ್ರಮಾಣ ಪತ್ರಗಳನ್ನು ಈ ಕಛೇರಿಗೆ ಕಳುಹಿಸುವಂತಿಲ್ಲ.</u>**
- SC, ST, ಇತರೆ ಹಿಂದುಳಿದ ವರ್ಗ (OBC) ಮತ್ತು ವಿದ್ಯಾರ್ಥಿಯ ಅಂಗವೈಕಲ್ಯತೆಗೆ (Disability) ಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ಹಾಗೂ ಚಾಲ್ತಿಯಲ್ಲಿರುವ ಬಗ್ಗೆ ಖಾತರಿ ಪಡಿಸಿಕೊಳ್ಳುವುದು.
- SC, ST ಮೀಸಲಾತಿ ಕೋರುವ ವಿದ್ಯಾರ್ಥಿಗಳ ಪ್ರಮಾಣ ಪತ್ರವನ್ನು ವಿದ್ಯಾರ್ಥಿಗಳಿಂದ ಪಡೆದು ಪ್ರಮಾಣ ಪತ್ರ ಪರಿಶೀಲಿಸಿ ಸದರಿ ಪ್ರಮಾಣ ಪತ್ರದಲ್ಲಿರುವ RD Number ನ್ನು ಕಡ್ಡಾಯವಾಗಿ ಭರ್ತಿ ಮಾಡುವುದು ಹಾಗೂ ಶಾಲಾ ಹಂತದಲ್ಲಿ ಪ್ರಮಾಣ ಪತ್ರವನ್ನು ಕಾಯ್ದಿರಿಸುವುದು.
- ಇತರೆ ಹಿಂದುಳಿದ ವರ್ಗ (OBC) ಮೀಸಲಾತಿ ಕೋರುವ ವಿದ್ಯಾರ್ಥಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ ಪರಿಶೀಲಿಸಿ ಸದರಿ ಪ್ರಮಾಣ ಪತ್ರದಲ್ಲಿರುವ RD Number ನ್ನು ಕಡ್ಡಾಯವಾಗಿ ಭರ್ತಿ ಮಾಡುವುದು ಹಾಗೂ ಸಂಬಂಧಿಸಿದ ಪ್ರಮಾಣ ಪತ್ರವನ್ನು ಶಾಲಾ ಹಂತದಲ್ಲಿ ಕಾಯ್ದಿರಿಸುವುದು.

- ವಿದ್ಯಾರ್ಥಿಯ ಅಂಗವೈಕಲ್ಯತೆಗೆ (Disability) ಗೆ ಸಂಬಂಧಿಸಿದಂತೆ ಪ್ರಮಾಣ ಪತ್ರವನ್ನು ಆಧರಿಸಿ Disability Status ಅನ್ನು ನಮೂದಿಸುವುದು ಹಾಗೂ ಸಂಬಂಧಿಸಿದ ಪ್ರಮಾಣ ಪತ್ರವನ್ನು ಶಾಲಾ ಹಂತದಲ್ಲಿ ಕಾಯ್ದಿರಿಸುವುದು.
- ವಿದ್ಯಾರ್ಥಿಗಳಿಂದ ಪಡೆದು ಕಾಯ್ದಿರಿಸಿದ ದಾಖಲೆಗಳನ್ನು ಮುಂದಿನ ದಿನಗಳಲ್ಲಿ ಪರಿಶೀಲನೆಗಾಗಿ ಇಲಾಖೆಗೆ ನೀಡುವುದು ಕಡ್ಡಾಯ.
- ವಿಧ್ಯಾರ್ಥಿ/ನಿಯ ಬ್ಯಾಂಕ್ ಖಾತೆಗೆ ಸಂಬಂಧಿಸಿದ ಮಾಹಿತಿಗಳನ್ನು ನಮೂದಿಸುವುದು. (ಬ್ಯಾಂಕ್ ಖಾತೆಯ ಸಂಖ್ಯೆ, ಬ್ಯಾಂಕ್ ಹೆಸರು, ಬ್ಯಾಂಕ್ ಶಾಖೆ, IFSC Code)
- ವಿದ್ಯಾರ್ಥಿ/ನಿಯ Photo ಮತ್ತು ಸಹಿಯನ್ನು ಅರ್ಜಿ ಭರ್ತಿ ಮಾಡುವ ಮೊದಲೇ JPEG Format ನಲ್ಲಿ Scan ಮಾಡಿ ಇಟ್ಟುಕೊಂಡಿರಬೇಕು.
- ವಿದ್ಯಾರ್ಥಿ/ನಿ Photo (Size60-80 kb) JPEG Format ನಲ್ಲಿ Upload ಮಾಡುವುದು ಕಡ್ಡಾಯ.
- ವಿದ್ಯಾರ್ಥಿ/ನಿ ಸಹಿಯನ್ನು (Size 20-50kb)JPEG Format ನಲ್ಲಿ Upload ಮಾಡುವುದು ಕಡ್ಡಾಯ.
- ದೃಢೀಕರಣ ಭಾಗದಲ್ಲಿ ನೀಡಿರುವ ಅಂಶಗಳನ್ನು ಓದಿ ಸರಿಯಾಗಿರುವುದನ್ನು ಖಾತರಿ ಪಡಿಸಿಕೊಂಡು ನಂತರ ಎಡಭಾಗದಲ್ಲಿ ನೀಡಿರುವ Check Box ಗೆ [√] ಗುರುತು ನಮೂದಿಸಿ 'Submit' ಮಾಡುವುದು.
- ಪ್ರತಿ ವಿದ್ಯಾರ್ಥಿಗೆ ತಲಾ 5ರೂ ನಂತೆ ನಿರ್ವಹಣಾ ವೆಚ್ಚವನ್ನು ಶಾಲಾ ಮುಖ್ಯ ಶಿಕ್ಷಕರು ತಮ್ಮ ಹಂತದಲ್ಲಿಯೇ ಕಟಾಯಿಸಿಕೊಂಡು ಉಳಿದ ಮೊತ್ತವನ್ನು ಪಾವತಿಸುವುದು.
- ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ ಮುಕ್ತಾಯವಾದ ನಂತರ ವಿದ್ಯಾರ್ಥಿಗಳಿಂದ ಸಂಗ್ರಹಿಸಿದ ಪರೀಕ್ಷಾ ಶುಲ್ಕವನ್ನು ಏಕಕಂತಿನಲ್ಲಿ ಶಾಲಾ ಲಾಗಿನ್‌ನಲ್ಲಿ **ಜನರೇಟ್ ಚಲನ್ ಕ್ಲಿಕ್** ಮಾಡಿದಾಗ **ಅರ್ಜಿ ಸಲ್ಲಿಸಿದ ಪ್ರತಿ ವಿದ್ಯಾರ್ಥಿಗೆ ರೂ.5/- ನಿರ್ವಹಣಾ ವೆಚ್ಚವನ್ನು ಹೊರತುಪಡಿಸಿ ಜನರೇಟ್ ಆಗುವ ಚಲನ್** ಬಳಸಿ ಐದು ದಿನಗಳ ಒಳಗಾಗಿ **ಕೆನರಾ ಬ್ಯಾಂಕಿನ ರಾಜ್ಯದ ಯಾವುದೇ Branch** ನಲ್ಲಿ ಶುಲ್ಕವನ್ನು ಪಾವತಿಸುವುದು ಹಾಗೂ ಶುಲ್ಕ ಪಾವತಿಸುವ ಬ್ಯಾಂಕ್‌ನಲ್ಲಿ ಚಲನ್‌ನಲ್ಲಿರುವ **By Cash** ಎಂಬ **ಜಾಗದಲ್ಲಿ ಚಲನ್ ಸಂಖ್ಯೆಯನ್ನು ನಮೂದಿಸುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಮುಖ್ಯ ಶಿಕ್ಷಕರು ತಿಳಿಸುವುದು.**
- **ಶುಲ್ಕವನ್ನು ರಾಜ್ಯದ ಯಾವುದೇ ಕೆನರಾ ಬ್ಯಾಂಕ್ ಶಾಖೆಯಲ್ಲಿ ಮಾತ್ರ ಪಾವತಿಸುವುದು. ಇತರೆ ಬ್ಯಾಂಕ್‌ಗಳಲ್ಲಿ ಪಾವತಿಸುವಂತಿಲ್ಲ.**
- **ಪರೀಕ್ಷೆಯ ಪ್ರವೇಶ ಪತ್ರವನ್ನು ಪರೀಕ್ಷಾ ದಿನಾಂಕದ 15 ದಿನಗಳ ಮುಂಚಿತವಾಗಿ ಶಾಲಾ** Login ಗೆ Upload ಮಾಡಲಾಗುವುದು. Login ಆಗಿ Download ಮಾಡಿಕೊಳ್ಳುವುದು ಹಾಗೂ ಮಾಹಿತಿ ಸರಿಯಿದೆಯೇ ಎಂದು ಪರಿಶೀಲಿಸಿ ವಿದ್ಯಾರ್ಥಿಗಳಿಗೆ ವಿತರಿಸುವುದು.
- NMMS ಪರೀಕ್ಷೆಗೆ ಅರ್ಜಿ ಭರ್ತಿ ಮಾಡುವ ಸಂಬಂಧ ಮಾಹಿತಿಯ ಅವಶ್ಯಕತೆಯಿದ್ದಲ್ಲಿ ಈ ಕಛೇರಿಯ ಸಹಾಯವಾಣಿ ಸಂಖ್ಯೆ: **080-23341615** ಗೆ, ಕಛೇರಿ ಕರ್ತವ್ಯದ ಅವಧಿಯಲ್ಲಿ ಕರೆಮಾಡಿ ಮಾಹಿತಿ ಪಡೆಯಬಹುದಾಗಿದೆ.

**ವಿಶೇಷ ಸೂಚನೆ:-** ಮುಖ್ಯ ಶಿಕ್ಷಕರು/ಪ್ರಾಂಶುಪಾಲರು **Online** ಅರ್ಜಿಯಲ್ಲಿನ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು. ಅರ್ಜಿಯನ್ನು ಭರ್ತಿ ಮಾಡಿದ ನಂತರ ಎಲ್ಲಾ ಮಾಹಿತಿಗಳು ಸರಿ ಇರುವುದನ್ನು ಖಾತ್ರಿ ಪಡಿಸಿಕೊಂಡು Submit ಮಾಡುವುದು. ಅರ್ಜಿಯನ್ನು Submit ಮಾಡಿದ ನಂತರ ಅರ್ಜಿ ಪ್ರತಿ (Report) ಮತ್ತು ಪೂರಕ ದಾಖಲೆಗಳ ಒಂದು ಪ್ರತಿ Print out ತೆಗೆದು ಶಾಲೆಯಲ್ಲಿ ಕಾಯ್ದಿರಿಸುವುದು. ಅರ್ಜಿ Submit ಮಾಡಿದ ನಂತರ Edit Option ನೀಡಲಾಗಿದೆ. Edit Option Button Click ಮಾಡಿ ಭರ್ತಿ ಮಾಡಿದ ಮಾಹಿತಿಗಳಲ್ಲಿ ತಪ್ಪುಗಳಿದ್ದಲ್ಲಿ ಸರಿಪಡಿಸಲು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ವರೆಗೂ ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮುಕ್ತಾಯವಾದ ನಂತರ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ. ಆ ನಂತರವೂ ಅರ್ಜಿಯಲ್ಲಿ ತಪ್ಪು, ಅಪೂರ್ಣ ಮಾಹಿತಿಗಳಿದ್ದಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯಸ್ಥರೇ ಹೊಣೆಗಾರರಾಗಿರುತ್ತಾರೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು ಮಾಹಿತಿಗಾಗಿ:-

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬೆಂಗಳೂರು ರವರಿಗೆ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ- ಕರ್ನಾಟಕ, ಬೆಂಗಳೂರು ರವರಿಗೆ.

4. ಅಪರ ಆಯುಕ್ತರು, ಸಾ.ಶಿ.ಇ, ಧಾರವಾಡ ರವರಿಗೆ.
5. ಅಪರ ಆಯುಕ್ತರು, ಸಾ.ಶಿ.ಇ, ಕಲಬುರ್ಗಿ ರವರಿಗೆ.
6. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ರವರಿಗೆ.
7. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ.
8. ನಿರ್ದೇಶಕರು, ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ.
9. ಕಛೇರಿ ಪ್ರತಿ.

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಸಾ.ಶಿ.ಇ ರವರಿಗೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಅಭಿವೃದ್ಧಿ), ಸಾ.ಶಿ.ಇ ರವರಿಗೆ.
3. ರಾಜ್ಯದ ಎಲ್ಲಾ ಬ್ಲಾಕ್‌ಗಳ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾ.ಶಿ.ಇ ರವರಿಗೆ.
4. ಸರ್ಕಾರಿ, ಅನುದಾನಿತ, ಹಾಗೂ ಸ್ಥಳೀಯ ಸಂಸ್ಥೆಗಳ ಶಾಲಾ ಮುಖ್ಯಶಿಕ್ಷಕರಿಗೆ (ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾ.ಶಿ.ಇ ರವರ ಮೂಲಕ).